# ಕರ್ನಾಟಕ ಸರ್ಕಾರ
## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:ಪ್ರಾಕಚೆಂ:ಅಂ-1:ಆಶಾ:2023

ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ
ಬೆಂಗಳೂರು-560009
ದಿನಾಂಕ: 16-12-2024

**ಸುತ್ತೋಲೆ**

ವಿಷಯ: **"ಯುವನಿಧಿ"** ಯೋಜನೆಯ ಅಡಿಯಲ್ಲಿ ಅರ್ಹ ಫಲಾನುಭವಿಗಳ ನೋಂದಣಿ ಕುರಿತು.

------

ಕರ್ನಾಟಕ ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಯಾದ **"ಯುವನಿಧಿ"** ಯೋಜನೆಯ ಅಡಿಯಲ್ಲಿ ಫಲಾನುಭವಿಗಳ ನೋಂದಣಿಗೆ ಸನ್ಮಾನ್ಯ ಮುಖ್ಯಮಂತ್ರಿಗಳು ದಿನಾಂಕ 26-12-2023ರ ರಂದು ಚಾಲನೆ ನೀಡಿದ್ದು, ನೋಂದಣಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಸದರಿ ಯೋಜನೆಗೆ ಕಾಲೇಜು ಶಿಕ್ಷಣ ಇಲಾಖೆಯ 2024ನೇ ವರ್ಷದಲ್ಲಿ ತೇರ್ಗಡೆಯಾದ ಪದವಿ, ಸ್ನಾತಕೋತ್ತರ ಹಾಗೂ ಡಿಪ್ಲೊಮಾ ಅಭ್ಯರ್ಥಿಗಳು ಅರ್ಹರಿರುತ್ತಾರೆ. ಈ ನಿಟ್ಟಿನಲ್ಲಿ **"ಯುವನಿಧಿ"** ಯೋಜನೆಯ ಅಡಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳನ್ನು ನೊಂದಾಯಿಸುವ ಸಂಬಂಧ ದಿನಾಂಕ 13-12-2024 ರಂದು ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ಕರೆಯಲಾಗಿದ್ದು, ಸದರಿ ಸಭೆಯಲ್ಲಿ ಈ ಕೆಳಕಂಡಂತೆ ಕಾಲೇಜುಗಳಲ್ಲಿ ಕ್ರಮ ವಹಿಸಲು ಸೂಚಿಸಲಾಗಿರುತ್ತದೆ.

ಈ ಮೇಲ್ಕಂಡ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಕಾಲೇಜಿನ ಪ್ರಾಂಶುಪಾಲರುಗಳು ತಮ್ಮ ಕಾಲೇಜುಗಳಲ್ಲಿ 2024ನೇ ವರ್ಷದಲ್ಲಿ ತೇರ್ಗಡೆಯಾದ ಪದವಿ, ಸ್ನಾತಕೋತ್ತರ ಹಾಗೂ ಡಿಪ್ಲೊಮಾ ಅಭ್ಯರ್ಥಿಗಳು **"ಯುವನಿಧಿ"** ಯೋಜನೆಯಡಿಯಲ್ಲಿ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿ ಸಲ್ಲಿಸುವಂತೆ ಕ್ರಮ ವಹಿಸುವುದು.

1. ಈ ಕುರಿತು ಕಾಲೇಜುಗಳಲ್ಲಿ **"ಯುವನಿಧಿ"** ಸಹಾಯವಾಣಿ ನಿರ್ಮಿಸಿ, ಅದಕ್ಕಾಗಿ ಒಬ್ಬರು ನೋಡಲ್ ಅಧಿಕಾರಿಯನ್ನು ನೇಮಕ ಮಾಡಲು ಕ್ರಮ ವಹಿಸುವುದು.
2. ಸದರಿ ಸುತ್ತೋಲೆಯನ್ನು ತಮ್ಮ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸಲು ಹಾಗೂ ಕಾಲೇಜಿನ ವೆಬ್‌ಸೈಟ್ ನಲ್ಲಿ ಪ್ರಕಟಣೆ ಮಾಡಲು ಕ್ರಮ ವಹಿಸಲು ಸೂಚಿಸಿದೆ.

ಮೇಲ್ಕಂಡಂತೆ ಕ್ರಮ ವಹಿಸಿದ ಬಗ್ಗೆ ಜಂಟಿ ನಿರ್ದೇಶಕರ ಕಛೇರಿಗೆ 03 ದಿನಗಳೊಳಗಾಗಿ ವರದಿ ನೀಡಲು ಸೂಚಿಸಲಾಗಿದೆ.

16/12/24

ಜಂಟಿ ನಿರ್ದೇಶಕರು
ಜಂಟಿ ನಿರ್ದೇಶಕರು
ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ
ಬೆಂಗಳೂರು – 560 009

ಇವರಿಗೆ :

1) ಈ ಕಛೇರಿಯ ವ್ಯಾಪ್ತಿಗೊಳಪಡುವ ಎಲ್ಲಾ ಖಾಸಗಿ ಅನುದಾನಿತ ಪದವಿ/ಕಾನೂನು/ಬಿ.ಎಡ್. ಹಾಗೂ ಚಿತ್ರಕಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ

2) ಕಛೇರಿ ಪ್ರತಿ

P.A.

ಸಂಖ್ಯೆ: ಉ.ಪ್ರಾ.ಉ.ವಿ.ಕ/ಯುವನಿಧಿ/02/2023–24

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ, ಬೆಂಗಳೂರು
ದಿನಾಂಕ: 9–12–2024.

## ಸಭಾ ಸೂಚನಾ ಪತ್ರ

ವಿಷಯ:– **"ಯುವನಿಧಿ"** ಯೋಜನೆಯ ಅಡಿಯಲ್ಲಿ ಅರ್ಹ ಫಲಾನುಭವಿಗಳ ನೋಂದಣಿ ಕುರಿತು.

****

ಕರ್ನಾಟಕ ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಯಾದ **"ಯುವನಿಧಿ"** ಯೋಜನೆಯ ಫಲಾನುಭವಿಗಳ ನೋಂದಣಿಗೆ ಸನ್ಮಾನ್ಯ ಮುಖ್ಯಮಂತ್ರಿಗಳು ದಿನಾಂಕ:26–12–2023ರಂದು ಚಾಲನೆ ನೀಡಿದ್ದು, ನೋಂದಣಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಸದರಿ ಯೋಜನೆಗೆ 2024ನೇ ವರ್ಷದಲ್ಲಿ ತೇರ್ಗಡೆಯಾದ ಪದವಿ, ಸ್ನಾತಕೋತ್ತರ ಹಾಗೂ ಡಿಪ್ಲೋಮಾ ಅಭ್ಯರ್ಥಿಗಳು ಕೂಡ ಅರ್ಹರಿರುತ್ತಾರೆ. 2024ನೇ ವರ್ಷದಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳ ನೋಂದಣಿ ಪ್ರಾರಂಭವಾಗಿರುತ್ತದೆ. ಈ ಸಂಬಂಧ ದಿನಾಂಕ:27–11–2024ರಂದು ಕರ್ನಾಟಕ ಸರ್ಕಾರದ ಅಭಿವೃದ್ಧಿ ಆಯುಕ್ತರು ಹಾಗೂ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯ ಅಪರ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ **"ಯುವನಿಧಿ"** ಯೋಜನೆಯ ಅಡಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳನ್ನು ನೋಂದಾಯಿಸುವಲ್ಲಿ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ. ಅದರಂತೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ **"ಯುವನಿಧಿ"** ಯೋಜನೆಯ ಅಡಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳನ್ನು ನೋಂದಾಯಿಸುವ ಸಂಬಂಧ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಲು ದಿನಾಂಕ: 13/12/24 ರಂದು ಪೂರ್ವಾಹ್ನ/ಅಪರಾಹ್ನ 11:30 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸಭೆಯನ್ನು ಆಯೋಜಿಸಲಾಗಿದ್ದು, ಸದರಿ ಸಭೆಗೆ ಅಗತ್ಯ ಮಾಹಿತಿಗಳೊಂದಿಗೆ ಕಡ್ಡಾಯವಾಗಿ ಹಾಜರಾಗಲು ಸೂಚಿಸಲಾಗಿದೆ.


**ಸಭೆಯ ಕಾರ್ಯಸೂಚಿಗಳು**

1. ಅರ್ಹ ಅಭ್ಯರ್ಥಿಗಳು ಯೋಜನೆಯ ಪ್ರಯೋಜನ ಪಡೆಯಲು ನೋಂದಣಿ ಮಾಡಿಸಿಕೊಳ್ಳುವ ನಿಟ್ಟಿನಲ್ಲಿ ಪ್ರಚಾರ ಮಾಡಲ ಕೈಗೊಂಡಿರುವ/ಕೈಗೊಳ್ಳಬೇಕಾದ ಕ್ರಮಗಳು.
2. ಅಭ್ಯರ್ಥಿಗಳ ಶೈಕ್ಷಣಿಕ ದಾಖಲಾತಿಗಳನ್ನು ನ್ಯಾಡ್ ಪೋರ್ಟನಲ್ಲಿ ಅಳವಡಿಸುವುದು.
3. Manual Verification of Documents ಬಾಕಿಯಿರುವ ಅರ್ಜಿಗಳನ್ನು ಇತ್ಯರ್ಥಗೊಳಿಉವ ಕುರಿತು.
4. 2024ನೇ ವರ್ಷದಲ್ಲಿ ಪದವಿ, ಸ್ನಾತಕೋತ್ತರ ಹಾಗೂ ಡಿಪ್ಲೋಮಾ ಪದವಿ ಪಡೆದವರ ಅಂಕಿ–ಅಂಶಗಳು.

ಜಿಲ್ಲಾಧಿಕಾರಿ
ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು

ಗೆ,

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಜಿಲ್ಲೆ
2. ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ. ವಲಯ ಕಛೇರಿ, ಪೂರ್ವ/ಪಶ್ಚಿಮ/ದಕ್ಷಿಣ/ಆರ್.ಆರ್.ನಗರ/ಮಹದೇವಪುರ/ದಾಸರಹಳ್ಳಿ/ಬೊಮ್ಮನಹಳ್ಳಿ/ಯಲಹಂಕ, ಬೆಂಗಳೂರು.
3. ಪ್ರಾಂತೀಯ ನಿರ್ದೇಶಕರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಪ್ರಾಂತೀಯ ಕಛೇರಿ, ಬೆಂಗಳೂರು


ಶ್ರೀ ಡಿ.ಕೆ ಶಿವಕುಮಾರ್
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ
ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ
ಯುವ ನಿಧಿ
ಯುವ ಜನತೆಯ ಉಜ್ವಲ ಭವಿಷ್ಯಕ್ಕಾಗಿ
ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆ
ಪ್ರತೀ ತಿಂಗಳು ನಿರುದ್ಯೋಗ ಭತ್ಯೆ
₹3000 ಪದವೀಧರರಿಗೆ
₹1500 ಡಿಪ್ಲೋಮಾ ಪದವೀಧರರಿಗೆ
ಕರ್ನಾಟಕದಲ್ಲಿ ಕನಿಷ್ಠ 6 ವರ್ಷಗಳವರೆಗೆ
ಪದವಿ/ಡಿಪ್ಲೋಮಾದವರೆಗೆ ಅಧ್ಯಯನ ಮಾಡಿದವರಾಗಿರಬೇಕು.
ಈ ಅರ್ಹತೆಯ ಪರಿಶೀಲನೆಗಾಗಿ 'ಸೇವಾ ಸಿಂಧು' ಪೋರ್ಟಲ್ ನಲ್ಲಿ ವಿದ್ಯಾರ್ಥಿಗಳು ತಮ್ಮ ಪದವಿ/ ಡಿಪ್ಲೋಮಾ ನೋಂದಣಿ ಸಂಖ್ಯೆಯನ್ನು (ಐ.ಡಿ) ದಾಖಲಿಸಬೇಕಾಗಿರುತ್ತದೆ.
ಆನ್‌ಲೈನ್‌ನಲ್ಲಿ ಮಾಹಿತಿ ಲಿಂಕ್ ಆಗದೆ ಇದ್ದಲ್ಲಿ ವಿದ್ಯಾರ್ಥಿಗಳು ಈ ಕೆಳಗಿನ ದಾಖಲೆಗಳನ್ನು ಒದಗಿಸಬೇಕಾಗುತ್ತದೆ.
■ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಪಿಯುಸಿ ಅಂಕಪಟ್ಟಿ ಮತ್ತು ಪದವಿ ಪ್ರಮಾಣ ಪತ್ರ/ಅಂಕಪಟ್ಟಿಗಳು ಅಥವಾ
■ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಪಿಯುಸಿ ಅಂಕಪಟ್ಟಿ ಮತ್ತು ಡಿಪ್ಲೋಮಾ ಪ್ರಮಾಣ ಪತ್ರ ಅಥವಾ ಅಂಕಪಟ್ಟಿ ಅಥವಾ
■ ಸಾಮಾನ್ಯ ಪ್ರವೇಶ ಪರೀಕ್ಷೆಯ (ಸಿಇಟಿ) ನೋಂದಣಿ ಸಂಖ್ಯೆ
■ ಪಡಿತರ ಚೀಟಿ ನೀಡಿದ ದಿನಾಂಕ ಮತ್ತು ಪದವಿ ಪ್ರಮಾಣ ಪತ್ರ
ನೇರ ನಗದು ವರ್ಗಾವಣೆ (Direct Transfer) ಸ್ವೀಕರಿಸಲು ಆಧಾರ್ ಸಂಖ್ಯೆಯೊಂದಿಗೆ ಸೇರ್ಪಡೆಯಾದ (Aadhar-seeded) ಬ್ಯಾಂಕ್ ಖಾತೆಯನ್ನು ನೀವು ಹೊಂದಿರಬೇಕು.
Aadhar-linked mobile number ಅಂದರೆ ನಿಮ್ಮ ಆಧಾರ್ ಸಂಖ್ಯೆಯೊಂದಿಗೆ ಲಿಂಕ್ ಆಗಿರುವ ನಿಮ್ಮ ಮೊಬೈಲ್ ನಂಬರ್ ಅನ್ನು ನೀಡಬೇಕು.
ಸಹಾಯವಾಣಿ : 1800 599 7154
ನೋಂದಾಯಿಸಿಕೊಳ್ಳಲು ಸೇವಾ ಸಿಂಧು ಪೋರ್ಟಲ್ https://sevasindhugs.karnataka.gov.in ಗೆ ಭೇಟಿ ನೀಡಿ
ಕರ್ನಾಟಕ ಒನ್, ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಕೂಡ ಅರ್ಜಿ ಸಲ್ಲಿಸಬಹುದು
ಸೇವಾಸಿಂಧು ಪೋರ್ಟಲ್‌ನಲ್ಲಿ ಮಾಸಿಕವಾಗಿ ನಿರುದ್ಯೋಗ ದೃಢೀಕರಣವು ಕಡ್ಡಾಯ. ತಪ್ಪು ಮಾಹಿತಿ ನೀಡಿದ್ದಲ್ಲಿ ದಂಡ ವಿಧಿಸಲಾಗುವುದು.



ಶ್ರೀ ಡಿ.ಕೆ ಶಿವಕುಮಾರ್



ಡಾ. ಶರಣ್ ಪ್ರಕಾಶ್ ಪಾಟೀಲ್



ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ

# ಯುವನಿಧಿ

ೀ ಸಿದ್ದರಾಮಯ್ಯ

ುವ ಜನತೆಯ ಉಜ್ವಲ ಭವಿಷ್ಯಕ್ಕಾಗಿ

ರ್ಣಟಕ ಸರ್ಕಾರದ ಗ್ಯಾರಂಟಿ ಯೋಜನೆ

ಪ್ರತೀ ತಿಂಗಳು ನಿರುದ್ಯೋಗ ಭತ್ಯೆ

| | |
|---|---|
| ₹3000 | ₹1500 |
| ಪದವೀಧರರಿಗೆ | ಡಿಪ್ಲೋಮಾ ಪದವೀಧರರಿಗೆ |



- **ನೇರ ನಗದು ವರ್ಗಾವಣೆ** **(Direct Transfer)** ಸ್ವೀಕರಿಸಲು ಆಧಾರ್ ಸಂಖ್ಯೆಯೊಂದಿಗೆ ಸೇರ್ಪಡೆಯಾದ **(Aadhar-seeded)** **ಬ್ಯಾಂಕ್ ಖಾತೆಯನ್ನು** ನೀವು ಹೊಂದಿರಬೇಕು.

- **Aadhar-linked mobile number** ಅಂದರೆ ನಿಮ್ಮ ಆಧಾರ್ ಸಂಖ್ಯೆಯೊಂದಿಗೆ ಲಿಂಕ್ ಆಗಿರುವ ನಿಮ್ಮ ಮೊಬೈಲ್ ನಂಬರ್ ಅನ್ನು ನೀಡಬೇಕು.

**2024**ರ ನೋಂದಣಿ ಪ್ರಾರಂಭ

ಸಹಾಯವಾಣಿ **1800 599 7154**

ಂದಾಯಿಸಿಕೊಳ್ಳಲು ಸೇವಾ ಸಿಂಧು ಪೋರ್ಟಲ್

**ps://sevasindhugs.karnataka.gov.in** ಗೆ ಭೇಟಿ ನೀಡಿ

ತವಾಗಿ ಕರ್ನಾಟಕ ಒನ್, ಬೆಂಗಳೂರು ಒನ್, ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಕೂಡ ಅರ್ಜಿ ಸಲ್ಲಿ

ಂಧು ಪೋರ್ಟಲ್‌ನಲ್ಲಿ ಮಾಸಿಕವಾಗಿ ನಿರುದ್ಯೋಗ ದೃಢೀಕರಣವು ಕಡ್ಡಾಯ. ತಪ್ಪು ಮಾಹಿತಿ ನೀಡಿದ್ದಲ್ಲಿ ದಂಡ ವಿಧಿಸಲಾ




ಕರ್ನಾಟಕ ಸರ್ಕಾರ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ
ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ






# ಯುವ ನಿಧಿ

ಯುವ ಜನತೆಯ ಉಜ್ವಲ ಭವಿಷ್ಯಕ್ಕಾಗಿ ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆ

**ವನಿಧಿಯಿಂದ ಎಷ್ಟು ನಿರುದ್ಯೋಗ ಭತ್ಯೆ ಸಿಗಲಿದೆ?**
ವೀಧರರಿಗೆ ಪ್ರತೀ ತಿಂಗಳು **3000 ರೂಪಾಯಿ**
ಪ್ಲೋಮಾ ತೇರ್ಗಡೆಯಾದವರಿಗೆ ಪ್ರತೀ ತಿಂಗಳು
**0 ರೂಪಾಯಿ**

**ವನಿಧಿಯಿಂದ ಎಲ್ಲಿಯವರೆಗೆ ಸಿಗಲಿದೆ ಭತ್ಯೆ?**
ಷ್ಟ 2 ವರ್ಷಗಳವರೆಗೆ ಅಥವಾ ಕೆಲಸ ಸಿಗುವವರೆಗೆ

**ವನಿಧಿ ಯೋಜನೆಗೆ ಬೇಕಾಗಿರುವ ದಾಖಲೆಗಳು**
ವಿ/ಡಿಪ್ಲೋಮಾ ಪ್ರಮಾಣ ಪತ್ರ.
ರ್ಣಾಟಕದಲ್ಲಿ ಕನಿಷ್ಠ 6 ವರ್ಷ ವಾಸವಿರುವ
ಖಲೆಗಳು.

**2024 ರ ನೋಂದಣಿ ಪ್ರಾರಂಭ**

**ಅರ್ಜಿ ಸಲ್ಲಿಸಲು ಭೇಟಿ ನೀಡಿ**

- ಗ್ರಾಮ್ ಒನ್ ಸೇವಾ ಕೇಂದ್ರ
- ಬಾಪೂಜಿ ಸೇವಾ ಕೇಂದ್ರ
- ಕರ್ನಾಟಕ ಒನ್
- ಬೆಂಗಳೂರು ಒನ್

## 'ನುಡಿದಂತೆ ನಡೆದ ಸರ್ಕಾರ'



**ಂದಾಯಿಸಿಕೊಳ್ಳಲು "ಸೇವಾ ಸಿಂಧು" ಪೋರ್ಟಲ್**
**tps://sevasindhugs.karnataka.gov.in**
**ನ್ನು ಭೇಟಿ ನೀಡಿ**
**ಕಾಯವಾಣಿ : 1800 599 7154**